# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/ 307 /2020-21. ದಿನಾಂಕ : 21-12-2020

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21, ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 19-12-2020 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ವಾರ್ಡ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿ. ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆಂಕಟೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 4 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 5 | ಶ್ರೀ.ರಾಮ ಐಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

ದಿನಾಂಕ: 19-12-2020 ರಂದು ನಡೆದ ವಾರ್ಡ್ -143ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳ ಅನುಮತಿಯೊಂದಿಗೆ ವಾರ್ಡ್ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ, ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

Scanned by CamScanner

ಮೊದಲು MMV ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ವೆಂಕಟೇಶ್ ರವರು ಮಾತನಾಡಿ MMV ರಸ್ತೆಯಲ್ಲಿ ಡಾಂಬರೀಕರಣ ಮಾಡಲು ಕಾರ್ಯಾದೇಶವಾಗಿದ್ದು, ಕಾಮಗಾರಿ ವಿಳಂಬವಾಗುತ್ತಿರುವ ಬಗ್ಗೆ ಪ್ರಾಸ್ತಾಪಿಸಿದರು. ಈ ಬಗ್ಗೆ ಚರ್ಚಿಸಲಾಗಿ BWSSB ರವರು ಒಳಚರಂಡಿ ಕೊಳವೆ ಅಳವಡಿಸಲು ರಸ್ತೆಯನ್ನು ಅಗೆದಿದ್ದು ಅದಕ್ಕೆ ವೆಟ್‌ಮಿಕ್ಸ್ ಹಾಕಿ ಗಟ್ಟಿಗೊಳಿಸಿದ ನಂತರ ಡಾಂಬರೀಕರಣ ಮಾಡಬೇಕಾಗಿರುತ್ತದೆ. ಅದುದರಿಂದ ಗುತ್ತಿಗೆದಾರರದೊಂದಿಗೆ ಚರ್ಚಿಸಲಾಗಿ ದಿನಾಂಕ:28-12-2020, 29-12-2020ರ ಈ ಎರಡು ದಿನಗಳಲ್ಲಿ ಡಾಂಬರೀಕರಣವನ್ನು ಮಾಡಲು ನಿರ್ಧರಿಸಲಾಯಿತು.

ನಂತರ ರಾಮಯ್ಯಂಗಾರ್ ರಸ್ತೆಯ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹಸಿಕಸದಿಂದ ಗೊಬ್ಬರ ಮಾಡಲು ಕಾಂಪೋಸ್ಟ್ ಬಿನ್‌ಗಳನ್ನು ನಿರ್ಮಿಸಲಾಗಿದ್ದು ಇವುಗಳನ್ನು ಸಮರ್ಪಕವಾಗಿ ಬಳಕೆ ಮಾಡುತ್ತಿರುವುದು ಕಂಡು ಬರುತ್ತಿಲ್ಲವೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ವಾರ್ಡಿನ ಕಿರಿಯ ಆರೋಗ್ಯ ಪರಿವೀಕ್ಷಕರನ್ನು ವಿಚಾರಸಲಾಗಿ ಇವುಗಳನ್ನು ಸಮರ್ಪಕವಾಗಿ ಬಳಸಲಾಗುತ್ತಿದ್ದು ಹಸಿಕಸದಿಂದ ಗೊಬ್ಬರವನ್ನು ಮಾಡಿ ಅಲ್ಲಿನ ನಿವಾಸಿಗಳಿಗೆ ಉಚಿತವಾಗಿ ನೀಡಲಾಗುತ್ತಿದೆಯೆಂದು ಸಭೆಗೆ ತಿಳಿಸಿದರು.

ನಂತರ ರಾಮಯ್ಯಂಗಾರ್ ರಸ್ತೆಯ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಪುನಃ ಮಾತನಾಡಿ ವಾರ್ಡಿನ ವಿವಿಧ ಕಡೆಗಳಲ್ಲಿ ಅವೈಜ್ಞಾನಿಕವಾಗಿ ನಿರ್ಮಿಸಲಾದ ರಸ್ತೆ ಹಂಪ್‌ಗಳಿದ್ದು ಇವುಗಳನ್ನು ತೆಗೆದು ವೈಜ್ಞಾನಿಕವಾಗಿ ನಿರ್ಮಿಸಿಕೊಡಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸೂಕ್ತ ಕ್ರಮವಹಿಸಲು ಬಿಬಿಎಂಪಿ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ರವರಿಗೆ ತಿಳಿಸುವುದಾಗಿ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಬಸವನಗುಡಿ ಪ್ರದೇಶದಲ್ಲಿ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಅಳವಡಿಸಲು ಸಭೆಯಲ್ಲಿ ಕೋರಿದರು. ಈ ಬಗ್ಗೆ ಚರ್ಚಿಸಲಾಗಿ ಸದರಿ ಕೆಲಸಕ್ಕೆ ಕಾರ್ಯಾದೇಶವನ್ನು ಗುತ್ತಿಗೆದಾರರಿಗೆ ನೀಡಲಾಗಿದ್ದು ಶೀಘ್ರವಾಗಿ ಕಾಮಗಾರಿಯನ್ನು ನಿರ್ವಹಿಸಲಾಗುವುದೆಂದು ವಾರ್ಡಿನ ಅಭಿಯಂತರರು ಸಭೆಗೆ ತಿಳಿಸಿದರು.

ನಂತರ ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರು ಸಂದೇಶವೊಂದನ್ನು ಕಳುಹಿಸಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ವಹಿಸಲು ಆದೇಶಿಸಿರುವುದನ್ನು ಸಮಿತಿಯ ಕಾರ್ಯದರ್ಶಿಗಳು ಸಭೆಯ ಗಮನಕ್ಕೆ ತಂದರು.

1. ಮಾನ್ಯ ಉಚ್ಚನ್ಯಾಯಾಲಯದ ರಿಟ್ ಪಿಟೀಷನ್ ಸಂಖ್ಯೆ-10096/2020 (GIM-PIL) ರ ನಿರ್ದೇಶನದಲ್ಲಿ ತಿಳಿಸಿರುವಂತೆ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ Begging and hawking children identification survey ಕೈಗೊಳ್ಳಬೇಕಾಗಿದ್ದು, ಈ ಬಗ್ಗೆ ರೆಸಿಡಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ (RWA) ಹಾಗೂ NGO ಗಳ ಮುಖೇನ ಗುರುತಿಸಿ ಮಾಹಿತಿ ಕಲೆ ಹಾಕಲು ಕ್ರಮ ವಹಿಸಬೇಕಾಗಿರುತ್ತದೆ.

Scanned by CamScanner

2. ಮಾನ್ಯ ಉಚ್ಚನ್ಯಾಯಾಲಯದ ರಿಟ್ ಪಿಟೀಷನ್ ಸಂಖ್ಯೆ: 15768/2013 ರ ಹಿನ್ನೆಲೆಯಲ್ಲಿ ಹೊರಡಿಸಲಾದ ಸರ್ಕಾರದ ಆದೇಶದಲ್ಲಿ 2020-21ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ ಶಾಲೆಗೆ ಹಾಜರಾಗಲು ನಗರ ಸ್ಥಳೀಯ ಸಂಸ್ಥೆಗಳು, ವಾರ್ಡ್‌ನ ಸದಸ್ಯರನ್ನು ಅಧ್ಯಕ್ಷರನ್ನಾಗಿಸಿ, ಮುಖ್ಯ ಉಪಾಧ್ಯಾಯರು, ಅಂಗನವಾಡಿ ಕಾರ್ಯಕರ್ತರು, ಎನ್.ಓ.ಜಿ.ಗಳನ್ನು ಸದಸ್ಯರನ್ನಾಗಿ ಮಾಡಿಕೊಂಡು ವಾರ್ಡ್ ಕಮಿಟಿಯನ್ನು ರಚಿಸಿ ಸದರಿ ಕಮಿಟಿಯು ಕಾಲಕಾಲಕ್ಕೆ ತಪಾಸಣೆ ನಡೆಸಿ ಶಾಲೆಯಿಂದ ವಂಚಿತರಾದ ಮಕ್ಕಳನ್ನು ಗುರುತಿಸಿ ಮಕ್ಕಳ ಕಲ್ಯಾಣಾಧಿಕಾರಿ(CDPO), ಕಾರ್ಮಿಕ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸುವ ಬಗ್ಗೆ ಕ್ರಮ ವಹಿಸಲು ತಿಳಿಸಿರುವುದನ್ನು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತ್ಯೇಕವಾದ ಆಪ್ ಸಿದ್ಧಪಡಿಸಲಾಗಿದ್ದು ಸದ್ಯದಲ್ಲಿಯೇ ಈ ಬಗ್ಗೆ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲು ತಿಳಿಸಲಾಗಿರುವುದನ್ನು ಸಭೆಯಲ್ಲಿ ಚರ್ಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ರಾತ್ರಿಹೊತ್ತು ತಪಾಸಣೆ ಕೈಗೊಂಡು ಬೀದಿ ಬೀದಿ ಮಲಗುವವರ ನಿರಾಶ್ರಿತರ ಸಂಖ್ಯೆಯನ್ನು ಕಲೆ ಹಾಕಲು ಅಗತ್ಯ ಕ್ರಮ ವಹಿಸುವಂತೆ ತಿಳಿಸಿರುವುನ್ನು ಸಭೆಯ ಗಮನಕ್ಕೆ ತರಲಾಯಿತು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

21/12/2020.
ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

21/12/2020
ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner